ಕರ್ನಾಟಕ ಸರ್ಕಾರ

**ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ**

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,
ಕಾಳಿದಾಸ ಮಾರ್ಗ, ಗಾಂಧಿನಗರ, ಬೆಂಗಳೂರು-560009.

---

ಸಂಖ್ಯೆ:ಕೆಪಿಆರ್‌ಸಿ-ಜಿಪಿಎ/ಜಿಪಿಎಸ್/22/2024 ದಿನಾಂಕ:24.06.2024.

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.

2. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ,
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.

ಮಾನ್ಯರೇ,

ವಿಷಯ : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕ್ಷೇತ್ರೀಯ ಇಲಾಖೆಗಳು ವಹಿಸಿರುವ ಕಾರ್ಯಗಳನ್ನು ಹಿಂಪಡಿಯುವ ಬಗ್ಗೆ..

ಉಲ್ಲೇಖ:1. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ:03:ಗ್ರಾಪಂಕಾ:2016 ಬೆಂಗಳೂರು ದಿನಾಂಕ:02.01.2016.

2. ದಿನಾಂಕ: 21.12.2023 ರಂದು ಮಾನ್ಯ ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡವಳಿ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಇತ್ತೀಚಿನ ದಿನಗಳಲ್ಲಿ ಬೇರೆ ಬೇರೆ ಇಲಾಖೆಗಳು ವಿವಿಧ ಕಾರ್ಯಗಳ ಮೇಲುಸ್ತುವಾರಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗಮನಕ್ಕೆ ತಾರದೇ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೆಚ್ಚುವರಿ ಕಾರ್ಯಭಾರವನ್ನು ನೀಡುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ಭಾರತ ಸರ್ಕಾರದ ಹಲವಾರು ಜನೋಪಯೋಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಅವುಗಳ ಕಾರ್ಯವೇ ಸಾಕಷ್ಟು ಇರುವುದರಿಂದ, ಇವರಿಗೆ ಬೇರೆ ಕ್ಷೇತ್ರೀಯ ಇಲಾಖೆಗಳ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸೂಚಿಸುವುದಾಗಲೀ ಅಥವಾ ಮೇಲುಸ್ತುವಾರಿ ನೀಡುವ ಮುನ್ನ ಸರ್ಕಾರದ ಗಮನಕ್ಕೆ ತರಲು ಸೂಚಿಸಲಾಗಿರುತ್ತದೆ. ಅದರಂತೆ ಕರ್ನಾಟಕ ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘವೂ ಸಹ ಉಲ್ಲೇಖ(1)ರ ಸುತ್ತೋಲೆ ಆದೇಶವನ್ನು ಮತ್ತೊಮ್ಮೆ ಅನುಷ್ಠಾನಗೊಳಿಸಲು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಉಲ್ಲೇಖಿತ ಸರ್ಕಾರದ ಸುತ್ತೋಲೆಯ ಸೂಚನೆಯನ್ವಯ ಕ್ಷೇತ್ರ ಇಲಾಖೆಗಳು ಹೆಚ್ಚುವರಿ ಜವಾಬ್ದಾರಿಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ವಹಿಸುವ ಮುನ್ನ ಸರ್ಕಾರದ ಗಮನಕ್ಕೆ ತರಲು ಸೂಚನೆ ನೀಡಲಾಗಿದೆ.

**ಲಗತ್ತು: ಉಲ್ಲೇಖಿತ ಸುತ್ತೋಲೆಯ ಪ್ರತಿ.**

ತಮ್ಮ ವಿಶ್ವಾಸಿ,

ಆಯುಕ್ತರು,
ಕರ್ನಾಟಕ ಪಂ.ರಾಜ್ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

24/6/2024.

**ಪ್ರತಿಯನ್ನು:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ,ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು.
3. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ, ಬೆಂಗಳೂರು.

# ಕರ್ನಾಟಕ ಸರ್ಕಾರ

ಸಂ:ಗ್ರಾಅಪ:03:ಗ್ರಾಪಂಕಾ:2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:02-01-2016

## ಸುತ್ತೋಲೆ

ವಿಷಯ: ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಕ್ಷೇತ್ರೀಯ ಇಲಾಖೆಗಳು ವಹಿಸಿರುವ ಕಾರ್ಯಗಳನ್ನು ಹಿಂಪಡಿಯುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ : ಗ್ರಾಅಪ/313/ಗ್ರಾಪಂಕಾ/2013, ದಿನಾಂಕ : 3-3-2014
2. ಸುತ್ತೋಲೆ ಸಂಖ್ಯೆ : ಗ್ರಾಅಪ/ 67/ಉಖಾಯೋ/2009, ದಿನಾಂಕ : 16-6-2014

***

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಗ್ರಾಮಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ಉಲ್ಲೇಖಿತ-1 ರ ಸರ್ಕಾರದ ಆದೇಶದನ್ವಯ ಕಾರ್ಯಹಂಚಿಕೆ ಮಾಡಲಾಗಿರುತ್ತದೆ.

ಉಲ್ಲೇಖ-2 ರ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳಲ್ಲಿ ಸಿಬ್ಬಂದಿ ಮತ್ತು ಮೂಲಭೂತ ಸೌಲಭ್ಯಗಳ ಕೊರತೆ ಇರುವುದರಿಂದ, ಹಾಲಿ ಇರುವ ಕಾರ್ಯದ ಒತ್ತಡವನ್ನು ನಿಭಾಯಿಸಲು ತೊಂದರೆಯಾಗುತ್ತಿರುವುದರಿಂದ, ಗ್ರಾಮ ಪಂಚಾಯತಿಗಳಲ್ಲಿ ಕಾರ್ಯಭಾರದ ಒತ್ತಡವನ್ನು ಪರಿಗಣಿಸಿ, ಗ್ರಾಮ ಪಂಚಾಯತಿಗಳಿಗೆ ಹೊಸ ಕಾರ್ಯಗಳನ್ನು ವಹಿಸುವ ಮುನ್ನ ಅನುಷ್ಠಾನ ಇಲಾಖೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರೊಂದಿಗೆ ಕಡ್ಡಾಯವಾಗಿ ಸಮಾಲೋಚಿಸಿ ಮುಂದಿನ ಕ್ರಮ ಕೈಗೊಳ್ಳಲು ಮತ್ತು ಇದನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವಂತೆ ಇಲಾಖಾ ಮುಖ್ಯಸ್ಥರಿಗೆ ಮುಖ್ಯ ಕಾರ್ಯದರ್ಶಿಗಳು ಸೂಚಿಸಿರುತ್ತಾರೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ರಾಜ್ಯ ಸರ್ಕಾರದ ಯೋಜನೆಗಳಾದ ಗ್ರಾಮ ವಿಕಾಸ ಯೋಜನೆ, ಗ್ರಾಮೀಣ ಕುಡಿಯುವ ನೀರು ಯೋಜನೆ, ಕಿರು ನೀರು ಸರಬರಾಜು ಯೋಜನೆ ಹಾಗೂ ಇನ್ನಿತರ ಪ್ರಮುಖ ಯೋಜನೆಗಳ ಅನುಷ್ಠಾನದ ಜೊತೆಗೆ ಭಾರತ ಸರ್ಕಾರದ ಎರಡು ಮಹತ್ತರ ಯೋಜನೆಗಳಾದ ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ ಹಾಗೂ ಸ್ವಚ್ಛ ಭಾರತ ಮಿಷನ್ ಯೋಜನೆಗಳನ್ನು ಸ್ಥಳೀಯ ಮಟ್ಟದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ನೋಡಿಕೊಳ್ಳುತ್ತಿದ್ದಾರೆ. ಇತ್ತೀಚೆಗಷ್ಟೇ, ಅಂದರೆ ಸೆಪ್ಟೆಂಬರ್ ನಂತರ ಉದ್ಯೋಗ ಖಾತರಿ ಯೋಜನೆಯಡಿ ಮಾನವ ದಿನಗಳನ್ನು 43.51 ಲಕ್ಷ ಪ್ರತಿ ದಿನದಿಂದ 230.00 ಲಕ್ಷ ಪ್ರತಿ ದಿನಕ್ಕೆ ಹೆಚ್ಚಿಸಿದ್ದು, ಜಾಬ್ ಕಾರ್ಡ್ ಹೊಂದಿದವರಿಗೆ ವಾರಕ್ಕೊಮ್ಮೆ ನೀಡಲಾಗುವ ದಿನಗೂಲಿಯನ್ನು 9.8% ರಿಂದ 33.18%ಕ್ಕೇ ಹೆಚ್ಚಿಸಲಾಗಿರುತ್ತದೆ ಹಾಗೂ ಸ್ವಚ್ಛ ಭಾರತ ಮಿಷನ್ ನಡಿ ಶೌಚಾಲಯ ನಿರ್ಮಾಣದ ಕಾರ್ಯದ ಪ್ರಗತಿಯ ವೇಗವನ್ನು ಹೆಚ್ಚಿಸಲು ತೀವ್ರ ನಿಗಾ ವಹಿಸಲಾಗಿರುತ್ತದೆ. ಅಲ್ಲದೇ, ಇನ್ನು ಮೂರು ತಿಂಗಳಲ್ಲಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಗಳ ಅನುಷ್ಠಾನದ ವೇಗವನ್ನು ಕೂಡಾ ಹೆಚ್ಚಿಸುವ ಅಗತ್ಯತೆ ಇರುತ್ತದೆ.



Generated from eOffice by Rathnamma G, KPRC-SPR(RTG), SUPERINTENDENT, KPRC on 25/06/2024 03:54 PM

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಗ್ರಾಮೀಣ ಭಾಗದಲ್ಲಿ ನಿರ್ವಹಿಸುತ್ತಿರುವ ಬಹುತೇಕ ಯೋಜನೆಗಳು ಭಾರತ ಸರ್ಕಾರದ ಅನುದಾನದ ನೆರವಿನಿಂದ ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಯೋಜನೆಗಳ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಳ್ಳದಿದ್ದಲ್ಲಿ, ಮುಂದಿನ ಆರ್ಥಿಕ ವರ್ಷದಿಂದ ಈ ಯೋಜನೆಗಳಿಗೆ ಭಾರತ ಸರ್ಕಾರದ ಅನುದಾನ ಕಡಿತವಾಗುವ ಸಂಭವವಿರುತ್ತದೆ.

ಆದರೆ, ಇತ್ತೀಚಿನ ದಿನಗಳಲ್ಲಿ ಬೇರೆ ಬೇರೆ ಇಲಾಖೆಗಳು ವಿವಿಧ ಕಾರ್ಯಗಳ ಮೇಲುಸ್ತುವಾರಿಯನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಗಮನಕ್ಕೆ ತಾರದೇ, ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಹೆಚ್ಚುವರಿ ಕಾರ್ಯಭಾರವನ್ನು ನೀಡುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಮುಖ್ಯ ಕಾರ್ಯದರ್ಶಿಗಳು ಹೊರಡಿಸಿರುವ ಮೇಲ್ಕಂಡ ಸುತ್ತೋಲೆಯಲ್ಲಿ ಕಟ್ಟುನಿಟ್ಟಿನ ಸೂಚನೆಯನ್ನು ನೀಡಿದ್ದರೂ ಸಹಾ ಕ್ಷೇತ್ರೀಯ ಇಲಾಖೆಗಳು ಅದನ್ನು ಪಾಲಿಸದೇ ಹೆಚ್ಚುವರಿ ಕಾರ್ಯಗಳನ್ನು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ನೀಡುತ್ತಿರುವುದು ಕಂಡುಬಂದಿರುತ್ತದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ಭಾರತ ಸರ್ಕಾರದ ಹಲವಾರು ಜನೋಪಯೋಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು ಅವುಗಳ ಕಾರ್ಯವೇ ಸಾಕಷ್ಟು ಇರುವುದರಿಂದ, ಇವರಿಗೆ ಬೇರೆ ಕ್ಷೇತ್ರೀಯ ಇಲಾಖೆಗಳ ಯೋಜನೆಗಳನ್ನು ಅನುಷ್ಠಾನಗೊಳಿಸುವುದಾಗಲೀ ಅಥವಾ ಮೇಲುಸ್ತುವಾರಿ ನೀಡಿದಲ್ಲಿ ನಮ್ಮ ಇಲಾಖೆಯು ನಿಗದಿಗೊಳಿಸಿರುವ ಗುರಿಯನ್ನು ನಿಗದಿತ ಅವಧಿಯಲ್ಲಿ ಕಾರ್ಯಗತಗೊಳಿಸಲು ಸಾಧ್ಯವಾಗುವುದಿಲ್ಲ.

ಈ ಹಿನ್ನೆಲೆಯಲ್ಲಿ ಹಾಗೂ ಉಲ್ಲೇಖ-2 ರ ಮುಖ್ಯ ಕಾರ್ಯದರ್ಶಿಗಳ ಸೂಚನೆಯನ್ವಯ ಕ್ಷೇತ್ರ ಇಲಾಖೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯೊಂದಿಗೆ ಸಮಾಲೋಚನೆ ನಡೆಸದೇ ನೀಡಲಾಗಿರುವ ಜವಾಬ್ದಾರಿಗಳನ್ನು ಕೂಡಲೇ ಹಿಂಪಡೆಯುವಂತೆ ಹಾಗೂ ಇನ್ನು ಮುಂದೆ ಯಾವುದೇ ಕ್ಷೇತ್ರೀಯ ಇಲಾಖೆಗಳ ಜವಾಬ್ದಾರಿಯನ್ನು ವಹಿಸದಂತೆ ಕಟ್ಟುನಿಟ್ಟಾಗಿ ಸೂಚನೆ ನೀಡಲಾಗಿದೆ.

(ಎನ್.ನಾಗಾಂಬಿಕಾ ದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
2. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,



Generated from eOffice by Rathnamma G, KPRC-SPR(RTG), SUPERINTENDENT, KPRC on 25/06/2024 03:54 PM